# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 21-05-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು.**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ. ಅಧ್ಯಕ್ಷರು. ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು.
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ. ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು.
3. ಮಾಧವಿ. ವೈದ್ಯಾಧಿಕಾರಿಗಳ ಕಛೇರಿ. ವಾರ್ಡ್ ಸಂಖ್ಯೆ.29. ಕಾಚರಕನಹಳ್ಳಿ.
4. ಶ್ರೀ ಹನುಮಂತಪ್ಪ. ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು.
5. ಶ್ರೀಮತಿ ವಿನುತ. ಪದಾಧಿಕಾರಿಗಳು. ಹೆಚ್.ಆರ್.ಬಿ.ಆರ್. 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
6. ಶ್ರೀಮತಿ ಸರಸ್ವತಿ. ಸದಸ್ಯರು. ಜಲವಾಯು ವಿಹಾರ್ ಅಸೋಸಿಯೇಷನ್(ರಿ)
7. ಶ್ರೀ ಕಿಳ್ಳಪ್ಪ (ಅಧ್ಯಕ್ಷರು. ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್. ಕಂದಾಯ ನಿರೀಕ್ಷಕರು.
2. ಶ್ರೀ ರಾಜೇಶ್. ಕಿರಿಯ ಆರೋಗ್ಯ ನಿರೀಕ್ಷಕರು.
3. ದವಲ್ ಸಾಬ್. ಇಂಜನಿಯರ್. ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ.
4. ಮಾರ್ಷಲ್. ವಾರ್ಡ್ ಸಂಖ್ಯೆ.29. ಕಾಚರಕನಹಳ್ಳಿ.
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ.
6. ಶ್ರೀ ಪುಟ್ಟಸ್ವಾಮಿ. ಬೆಸ್ಕಾಂ ಇಲಾಖೆ.
7. ಶ್ರೀಮತಿ ರಾಜೇಶ್ವರಿ. ಕಲ್ಯಾಣ ಇಲಾಖೆ.
8. ಕಿರಿಯ/ಸಹಾಯಕ ಅಭಿಯಂತರರು. ಬೆಸ್ಕಾಂ ಇಲಾಖೆ.

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ, ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್; 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ಚರಂಡಿಗಳಲ್ಲಿ ಹೂಳು ತೆಗೆಯುವ ಕಾಮಗಾರಿ ಪ್ರಗತಿಯಲ್ಲಿದ್ದು, ಹಲವು ಕಡೆ ಚರಂಡಿಗಳ ಮೇಲುತಿರುವುಗಳಿಗೆ ಕವರಿಂಗ್ ಸ್ಲಾಬ್ ಇರುವುದಿಲ್ಲ ಎಂದು ಸಭೆಯ ಗಮನಕ್ಕೆ ತಂದಾಗ, ಈ ಬಗ್ಗೆ ಚರ್ಚಿಸಿ, ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು, ಅವಶ್ಯಕತೆ ಇರುವ ಕಡೆಗಳಲ್ಲಿ ಚರಂಡಿಗಳ ಮೇಲೆ ಕವರಿಂಗ್ ಸ್ಲಾಬ್‌ಗಳನ್ನು ಅಳವಡಿಸಿಕೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

2) ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ಬಿಡಿಎ ಬಡಾವಣೆ, ಹಲವು ಖಾಲಿ ನಿವೇಶನಗಳು ಸ್ವಚ್ಛಗೊಳಿಸದೇ ಇರುವುದರಿಂದ ಸದರಿ ನಿವೇಶನಗಳಲ್ಲಿ ಸ್ಥಳೀಯರು ಕಸ ಇತ್ಯಾದಿ ಅನುಪಯುಕ್ತ

ವಸ್ತುಗಳನ್ನು ಎಸೆಯುತ್ತಾರೆ. ಇದರಿಂದ ಈ ನಿವೇಶನಗಳು ಬ್ಲಾಕ್‌ಸ್ಪಾಟ್‌ಗಳಾಗಿ ಮಾರ್ಪಾಡಾಗುತ್ತಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಹಾಜರಿದ್ದ ಆರೋಗ್ಯ ನಿರೀಕ್ಷಕರು, ಮಾತನಾಡಿ, ನಿವೇಶನಗಳನ್ನು ಸ್ವಚ್ಛಗೊಳಿಸಲಾಗುವುದು ಮತ್ತು ನಿವೇಶನಗಳ ಮಾಲೀಕರನ್ನು ಗುರುತಿಸಿ, ಸದರಿಯವರಿಗೆ ತಿಳುವಳಿಕೆ ನೀಡಲಾಗುವುದು ಎಂದು ಸಭೆಗೆ ತಿಳಿಸಿದರು.

3) **<u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)</u>** ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಅನೇಕ ಕಡೆ ಬೀದಿ ದೀಪಗಳ ಸ್ವಿಚ್‌ಗಳು ಹಾಳಾಗಿದ್ದು, ತಂತಿಗಳನ್ನು ಜೋಡಿಸಿ, ಬೀದಿ ದೀಪಗಳನ್ನು ಉರಿಸಲಾಗುತ್ತಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಹಾಜರಿದ್ದ ಬೀದಿ ದೀಪಗಳ ಗುತ್ತಿಗೆದಾರರು, ಪರಿವೀಕ್ಷಿಸಿ, ಅವಶ್ಯಕತೆ ಇರುವ ಕಡೆ ಡಿಪಿ ಸ್ವಿಚ್‌ಗಳನ್ನು ಅಳವಡಿಸಲಾಗುವುದೆಂದು ಸಭೆಗೆ ತಿಳಿಸಿದರು.

4) <u>ಶ್ರೀಮತಿ ಸರಸ್ವತಿ, ಸದಸ್ಯರು, **ಜಲವಾಯು ವಿಹಾರ್ ಅಸೋಸಿಯೇಷನ್**(ರಿ)</u> ರವರು ಮಾತನಾಡಿ, ಸಿ.ಎಂ.ಆರ್ ವೃತ್ತದಲ್ಲಿ ರಸ್ತೆ ವಿಭಜಕಗಳನ್ನು ಕ್ರಮ ಬದ್ಧವಾಗಿ ಇಡದೇ ಸಾರ್ವಜನಿಕ ವಾಹನ ಸಂಚಾರಕ್ಕೆ ಅಡಚಣೆಯಾಗಿರುತ್ತದೆ ಎಂದು ಸಭೆಗೆ ತಿಳಿಸಿದಾಗ ಸಭೆಯಲ್ಲಿ ಹಾಜರಿದ್ದ ಸಂಚಾರಿ ಪೊಲೀಸ್ ಅಧಿಕಾರಿಗಳು ಸಿ.ಎಂ.ಆರ್ ವೃತ್ತದಲ್ಲಿರುವ ಡಿವೈಡರ್‌ಗಳನ್ನು ಕೂಡಲೇ ಬೇರೆ ರಸ್ತೆಗೆ ಸ್ಥಳಾಂತರಿಸಲಾಗುವುದೆಂದು ಸಭೆಗೆ ಉತ್ತರಿಸಿದರು.

5) **<u>ಮಾಧವಿ, ವೈದ್ಯಾಧಿಕಾರಿಗಳ ಕಛೇರಿ, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ, ರವರು ಮಾತನಾಡಿ,</u>** ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಯಾವುದೇ ಪಾಸಿಟಿವ್ ಪ್ರಕರಣ ದೃಢಪಟ್ಟಿರುವುದಿಲ್ಲ, ಎಲ್ಲಾ 60 ವರ್ಷ ವಯೋಮಿತಿ ಮೀರಿದವರಿಗೆ ಬೂಸ್ಟರ್ ಡೋಸ್ ಅನ್ನು ಕೊಡಲಾಗುತ್ತಿರುತ್ತದೆ ಮತ್ತು 12 ರಿಂದ 14 ವಯೋಮಾನದವರಿಗೆ ವ್ಯಾಕ್ಸಿನೇಷನ್ ಅನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ನೀಡಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

Prasanna Kumari A
ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**<u>ಪ್ರತಿಯನ್ನು</u>**

1) ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.